Akashvani: Bangalore
National Bulletin In Kannada
30.05.2026: 7.35AM
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

30.05.2026: 7.35AM

ಮುಖ್ಯಾಂಶಗಳು :

1. ಉದಯೋನ್ಮುಖ ಭದ್ರತಾ ಸವಾಲು ಎದುರಿಸುವ ನಿಟ್ಟಿನಲ್ಲಿ ಬಿಎಸ್‌ಎಫ್‌ಗೆ ಹೆಚ್ಚುವರಿ ಜವಾಬ್ದಾರಿ - ಕೇಂದ್ರ ಗೃಹ ಸಚಿವ ಅಮಿತ್ ಶಾ
2. ಐದು ದಿನಗಳ ಭೇಟಿಗಾಗಿ ಇಂದು ಭಾರತಕ್ಕೆ ಮ್ಯಾನ್ಮಾರ್ ಅಧ್ಯಕ್ಷರ ಆಗಮನ
3. ಉಕ್ರೇನ್ ಸಂಘರ್ಷ ಅಂತ್ಯಗೊಳ್ಳುವ ಹಂತದಲ್ಲಿದೆ - ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್
4. ಐಪಿಎಲ್ ಟಿ-೨೦ ಕ್ರಿಕೆಟ್: ರಾಜಸ್ತಾನ್ ರಾಯಲ್ಸ್ ವಿರುದ್ಧ ಗೆದ್ದು ಫೈನಲ್ ತಲುಪಿದ ಗುಜರಾತ್ ಟೈಟನ್ಸ್

*********

ಉದಯೋನ್ಮುಖ ಭದ್ರತಾ ಸವಾಲುಗಳನ್ನು ಎದುರಿಸುವಲ್ಲಿ ಗಡಿ ಭದ್ರತಾ ಪಡೆ-ಬಿಎಸ್‌ಎಫ್‌ಅನ್ನು ಹೆಚ್ಚು ಪರಿಣಾಮಕಾರಿಯಾಗಿಸಲು ಹೆಚ್ಚುವರಿ ಜವಾಬ್ದಾರಿಯ ಕ್ಷೇತ್ರಗಳನ್ನು ನಿಯೋಜಿಸಲು ಸರ್ಕಾರ ಪರಿಗಣಿಸುತ್ತಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ತಿಳಿಸಿದ್ದಾರೆ. ಭಾರತ-ಪಾಕಿಸ್ತಾನ ಗಡಿಯಲ್ಲಿ ಎರಡು ಕಾರ್ಯತಂತ್ರದ ನಿರ್ಣಾಯಕ ನೂತನ ಹೊರಠಾಣೆಗಳನ್ನು ನಿನ್ನೆ ಗುಜರಾತ್‌ನ ಭುಜ್‌ನಲ್ಲಿ ಉದ್ಘಾಟಿಸಿದ ನಂತರ ಬಿಎಸ್‌ಎಫ್ ಸಿಬ್ಬಂದಿಯೊಂದಿಗೆ ಅವರು ಸಂವಾದ ನಡೆಸಿದರು. ಬಿಎಸ್‌ಎಫ್ ಸ್ಥಾಪನೆಯ ೬೦ ನೇ ವರ್ಷದಲ್ಲಿ, ಬಿಎಸ್‌ಎಫ್‌ನ ಗಡಿ ಭದ್ರತೆಯ ಪರಿಕಲ್ಪನೆಯನ್ನು ಸಂಪೂರ್ಣವಾಗಿ ಪರಿವರ್ತಿಸಲು ನಿರ್ಧಾರ ತೆಗೆದುಕೊಳ್ಳಲಾಗಿದೆ. ಗಡಿ ಭದ್ರತೆಯ ಸಾಂಪ್ರದಾಯಿಕ ವಿಧಾನವನ್ನು ಬದಲಿಸಲು 'ಪ್ರಾದೇಶಿಕ ಭದ್ರತೆ'ಯ ಹೊಸ ಪರಿಕಲ್ಪನೆಯನ್ನು ಪರಿಚಯಿಸುವ ಮೂಲಕ ನಾಲ್ಕು ಕೋನಗಳ ಭದ್ರತಾ ಗ್ರಿಡ್ ಸ್ಥಾಪಿಸಲಾಗುವುದು ಎಂದು ಅಮಿತ್ ಶಾ ಘೋಷಿಸಿದರು.ಈ ಉಪಕ್ರಮವು ಬಿಎಸ್‌ಎಫ್ ಸಿಬ್ಬಂದಿಯೊಂದಿಗೆ ಸಾರ್ವಜನಿಕರು, ನಾಗರಿಕ ಆಡಳಿತ, ಸ್ಥಳೀಯ ಪೊಲೀಸರು ಮತ್ತು ಮಿಲಿಟರಿಯಲ್ಲಿ ಹಂಚಿಕೊಳ್ಳಲಾದ ಪ್ರಾಥಮಿಕ ಜವಾಬ್ದಾರಿಯನ್ನು ಒಳಗೊಂಡಿರುತ್ತದೆ ಎಂದು ಅವರು ವಿವರಿಸಿದರು. ಸ್ಮಾರ್ಟ್ ಬಾರ್ಡರ್ ಸೆಕ್ಯುರಿಟಿ ಯೋಜನೆಯಡಿಯಲ್ಲಿ, ಗಡಿಗಳಲ್ಲಿ ಭದ್ರತಾ ಗ್ರಿಡ್‌ಗಳನ್ನು ಬಲಪಡಿಸುವ ಪ್ರಯತ್ನಗಳು ನಡೆಯುತ್ತಿವೆ ಎಂದು ಕೇಂದ್ರ ಗೃಹ ಸಚಿವರು ಹೇಳಿದರು. ಈ ಪ್ರಯತ್ನಕ್ಕೆ ಸಾವಿರಾರು ಕೋಟಿ ರೂಪಾಯಿಗಳ ಹೂಡಿಕೆ ಅಗತ್ಯವಿದೆ. ಡ್ರೋನ್‌ಗಳು, ರಾಡಾರ್‌ಗಳು, ಕಾವಲು ಗೋಪುರಗಳು, ಅತ್ಯಾಧುನಿಕ ತಂತ್ರಜ್ಞಾನ ಮತ್ತು ಭದ್ರತಾ ಸಿಬ್ಬಂದಿಗಳ ನಿಯೋಜನೆಯು ದೃಢವಾದ ಭದ್ರತಾ ಗ್ರಿಡ್ ರಚನೆಗೆ ಕಾರಣವಾಗುತ್ತದೆ. ಒಮ್ಮೆ ಸ್ಥಾಪನೆಯಾದ ನಂತರ ಯಾರೂ ದೇಶದ ಗಡಿಗಳನ್ನು ಉಲ್ಲಂಘಿಸಲು ಧೈರ್ಯ ಮಾಡುವುದಿಲ್ಲ ಎಂದು ಸಚಿವ ಅಮಿತ್ ಶಾ ಪ್ರತಿಪಾದಿಸಿದರು.

*********

ಮ್ಯಾನ್ಮಾರ್ ಅಧ್ಯಕ್ಷ ಯು ಮಿನ್ ಔಂಗ್ ಹ್ಲೈಂಗ್ ಐದು ದಿನಗಳ ಭಾರತ ಭೇಟಿಗಾಗಿ ಇಂದು ನವದೆಹಲಿಗೆ ಆಗಮಿಸಲಿದ್ದಾರೆ. ವಿದೇಶಾಂಗ ವ್ಯವಾಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ನವದೆಹಲಿಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ್ದಾರೆ. ಮ್ಯಾನ್ಮಾರ್ ಅಧ್ಯಕ್ಷರು ಈ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿ, ಉಭಯ ದೇಶಗಳ ಬಲವರ್ಧನೆ ಕುರಿತಂತೆ ವಿಚಾರ ವಿನಿಮಯ ನಡೆಸಲಿದ್ದಾರೆ. ಭಾರತ-ಚೀನಾ ಗಡಿ ಕುರಿತು ಇತ್ತೀಚೆಗೆ ನಡೆದ ಸಲಹೆ ಮತ್ತು ಸಮನ್ವಯದ ಕಾರ್ಯಕಾರಿ ವ್ಯವಸ್ಥೆ ಸಭೆ ಬಗ್ಗೆ ಪ್ರಸ್ತಾಪಿಸಿದ ಜೈಸ್ವಾಲ್ ಚರ್ಚೆಗಳು ರಚನಾತ್ಮಕವಾಗಿದ್ದು, ಉಭಯ ಪಕ್ಷಗಳು ಗಡಿ ನಿರ್ವಹಣೆ ಹಾಗೂ ಸಹಕಾರ ಕುರಿತಂತೆ ಚರ್ಚೆ ನಡೆಸಿದವು. ಭಾರತ, ಗಡಿ ನದಿ ಕುರಿತಾದ ಮುಂದಿನ ಪರಿಣತರ ಸಭೆಯನ್ನು ಆದಷ್ಟು ಬೇಗ ಆಯೋಜಿಸುವ ಬಗ್ಗೆ ಒತ್ತಾಸೆ ನೀಡಿತು ಎಂದು ವಿವರ ನೀಡಿದರು. ಭಾರತ, ಆಫ್ರಿಕಾಕ್ಕೆ ಮೊದಲ ಕಂತಿನ ವೈದ್ಯಕೀಯ ಸಾಮಗ್ರಿಗಳನ್ನು ಪೂರೈಸುತ್ತಿದ್ದು, ಉಗಾಂಡದಲ್ಲಿರುವ ಭಾರತೀಯ ಹೈಕಮಿಷನರ್ ಸಿಡಿಸಿಎ ಕಚೇರಿಗೆ ಇಂದು ಅವುಗಳನ್ನು ಹಸ್ತಾಂತರಿಸಿದ್ದಾರೆ ಎಂದು ಪ್ರಶ್ನೆಯೊಂದಕ್ಕೆ ಉತ್ತರ ನೀಡಿದರು. ಬಾಂಗ್ಲಾದೇಶಿ ಅಕ್ರಮ ವಲಸಿಗರ ಕುರಿತಂತೆ ಪ್ರತಿಕ್ರಿಯಿಸಿರುವ ಅವರು, ಭಾರತ, ೨ ಸಾವಿರದ ೬ಲಂಕ್ಕೂ ಹೆಚ್ಚು ಪ್ರಕರಣಗಳನ್ನು ರಾಷ್ಟ್ರೀಯತೆಯ ಪರಿಶೀಲನೆಗಾಗಿ ಬಾಂಗ್ಲಾದೇಶಕ್ಕೆ ಹಸ್ತಾಂತರಿಸಲಾಗಿದೆ. ಪರಿಶೀಲನೆಯ ನಂತರ ಈ ವ್ಯಕ್ತಿಗಳನ್ನು ಬಾಂಗ್ಲಾದೇಶಕ್ಕೆ ಕಳುಹಿಸಲು ಸಾಧ್ಯವಾಗುತ್ತದೆ ಎಂದು ಹೇಳಿದರು. ಭಾರತ-ಅಮೆರಿಕ ವಾಣಿಜ್ಯ ಸಂಬಂಧ ಕುರಿತಂತೆ ಪ್ರಸ್ತಾಪಿಸಿದ ಅವರು, ಅಮೆರಿಕದ ನಿಯೋಗವೊಂದು ಮುಂದಿನ ವಾರ ಭಾರತಕ್ಕೆ ಆಗಮಿಸುವ ನಿರೀಕ್ಷೆಯಿದೆ ಎಂದು ವಿದೇಶಾಂಗ ವ್ಯವಾಹಾರಗಳ ಸಚಿವಾಲಯದ ವಕ್ತಾರ ರಣದೀರ್ ಜೈಸ್ವಾಲ್ ತಿಳಿಸಿದರು.

*********

ಸಮಗ್ರ ಶಿಕ್ಷಣ ಅಭಿಯಾನದಡಿಯಲ್ಲಿ ನಿಧಿ ಬಿಡುಗಡೆ ಮತ್ತು ಬಳಕೆಯ ಕುರಿತು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ವಿವರವಾದ ಪರಿಶೀಲನಾ ಸಭೆ ನಡೆಸಿದ್ದಾರೆ. ಸಮಗ್ರ ಶಿಕ್ಷಣ ಅಭಿಯಾನ, ಪಿಎಂ-ಪೋಷಣ್, ಉಲ್ಲಾಸ್, ಪಿಎಂ-ಶ್ರೀ ಸೇರಿದಂತೆ ಪ್ರಮುಖ ಯೋಜನೆಗಳ ಮೂಲಕ ಸಮಗ್ರ ವಿಧಾನವನ್ನು ಈ ವರ್ಷದಿಂದ ಕೈಗೊಳ್ಳಲಾಗುವುದು. ಇದು ಶಾಲಾ ಶಿಕ್ಷಣ ಪರಿಸರ ವ್ಯವಸ್ಥೆಯಾದ್ಯಂತ ಹೆಚ್ಚಿನ ಸಮನ್ವಯ ಮತ್ತು ಪ್ರಭಾವವನ್ನು ಖಚಿತಪಡಿಸುತ್ತದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಸಚಿವ ಧರ್ಮೇಂದ್ರ ಪ್ರಧಾನ್ ಹೇಳಿದ್ದಾರೆ.

*********

ಸಿಬಿಎಸ್‌ಇ ಫಲಿತಾಂಶದ ನಂತರದ ಚಟುವಟಿಕೆಗಳ ಪೋರ್ಟಲ್ ಜೂನ್ ೧ ರಿಂದ ಕಾರ್ಯನಿರ್ವಹಿಸಲಿದೆ ಎಂದು ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿ-ಸಿಬಿಎಸ್‌ಇ ತಿಳಿಸಿದೆ. ಅರ್ಜಿಗಳನ್ನು ಸಲ್ಲಿಸಲು ಉದ್ದೇಶಿಸಿರುವ ವಿದ್ಯಾರ್ಥಿಗಳ ಉತ್ತರ ಪ್ರತಿಗಳ ಪರಿಶೀಲನೆ ಮತ್ತು ಮರುಮೌಲ್ಯಮಾಪನಕ್ಕಾಗಿ ಪಾರದರ್ಶಕ ಮತ್ತು ದೋಷ-ಮುಕ್ತ ಪ್ರಕ್ರಿಯೆಯನ್ನು ಖಚಿತಪಡಿಸಿಕೊಳ್ಳಲು ಹಾಗೂ ಮೌಲ್ಯಮಾಪನದ ಉತ್ತಮ ಗುಣಮಟ್ಟ ಖಚಿತಪಡಿಸಿಕೊಳ್ಳಲು ಪೋರ್ಟಲ್ ಸ್ಥಾಪಿಸಲಾಗಿದೆ ಎಂದು ಸಿಬಿಎಸ್‌ಇ ಹೇಳಿದೆ.

ವಿದ್ಯಾರ್ಥಿಗಳು ಸಿಬಿಎಸ್‌ಇ ಟೆಲಿ-ಕೌನ್ಸೆಲಿಂಗ್ ಸಹಾಯವಾಣಿ- ೧೮೦೦೧೧೮೦೦೪ ಮತ್ತು ಇಮೇಲ್- resultcbse2026@cbseshiksha.in ಮೂಲಕ ಸಂಪರ್ಕಿಸಬಹುದು.

*********

ವಿನ್ಯಾಸ ಲಿಂಕ್ಡ್ ಇನ್ಸೆಂಟಿವ್-ಡಿಎಲ್‌ಐ ಯೋಜನೆ ಉತ್ತೇಜಕ ಫಲಿತಾಂಶಗಳನ್ನು ನೀಡುತ್ತಿದೆ ಎಂದು ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ತಿರುವನಂತಪುರಂ ಮೂಲದ ಸೆಮಿಕಂಡಕ್ಟರ್ ಸ್ಟಾರ್ಟ್-ಅಪ್ ನೇತ್ರಸೆಮಿ ದೇಶದ ಮೊದಲ ಎಡ್ಜ್ ಎಐ ಸಿಸ್ಟಮ್-ಆನ್-ಚಿಪ್, 'ನೇತ್ರಾ ಎ-೨೦೦೦' ಅನ್ನು ಅಭಿವೃದ್ಧಿಪಡಿಸಿದೆ. ಇದನ್ನು ಸುಧಾರಿತ ೧೨-ನ್ಯಾನೊಮೀಟರ್ ತಂತ್ರಜ್ಞಾನ ನೋಡ್ ಬಳಸಿ ಅಭಿವೃದ್ಧಿಪಡಿಸಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ವಾಣಿಜ್ಯ ಪ್ರಮಾಣದಲ್ಲಿ ನಿಯೋಜಿಸಿದಾಗ, ಕಣ್ಗಾವಲು, ಆಟೋಮೊಬೈಲ್‌ಗಳು, ರೊಬೊಟಿಕ್ಸ್ ಮತ್ತು ಡ್ರೋನ್‌ಗಳಂತಹ ಕ್ಷೇತ್ರಗಳಲ್ಲಿ ಸ್ಮಾರ್ಟ್ ವಿಷನ್ ಅಪ್ಲಿಕೇಶನ್‌ಗಳಿಗೆ ಚಿಪ್ ಶಕ್ತಿ ನೀಡುತ್ತದೆ ಎಂದು

*********

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ದೇಶ ವಿದೇಶಗಳಲ್ಲಿರುವ ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್‌ನ ೧೩೪ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಈ ಕಾರ್ಯಕ್ರಮ ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಬಿತ್ತರಗೊಳ್ಳಲಿದೆ.

*********

ಉಕ್ರೇನ್‌ನಲ್ಲಿನ ಸಂಘರ್ಷ ಅಂತ್ಯಗೊಳ್ಳುವ ಹಂತದಲ್ಲಿದೆ. ಇದಕ್ಕೆ ಯುದ್ಧಭೂಮಿಯಲ್ಲಿನ ಪರಿಸ್ಥಿತಿ ಸಾಕ್ಷಿಯಾಗಿದೆ ಎಂದು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಹೇಳಿದ್ದಾರೆ. ಈ ಕುರಿತು ಪುಟಿನ್ ಅವರ ಮಾತುಗಳನ್ನು ಉಲ್ಲೇಖಿಸಿ, ರಷ್ಯಾದ ಸರ್ಕಾರಿ ಸ್ವಾಮ್ಯದ ಸುದ್ದಿ ಸಂಸ್ಥೆ ವರದಿ ಮಾಡಿದೆ. ಯುದ್ಧಭೂಮಿಯಲ್ಲಿನ ಪರಿಸ್ಥಿತಿಯು ಅಂತ್ಯಗೊಳ್ಳುವ ರೀತಿಯಲ್ಲಿದೆ. ಉಕ್ರೇನ್‌ನಲ್ಲಿನ ಸಂಘರ್ಷದ ಅಂತ್ಯಕ್ಕೆ ನಿರ್ದಿಷ್ಟ ಸಮಯದ ಚೌಕಟ್ಟನ್ನು ಹೆಸರಿಸುವುದು ಅಜಾಗರೂಕತೆಯಾಗುತ್ತದೆ. ಯುದ್ಧದ ಸಮಯದಲ್ಲಿ ನಿರ್ದಿಷ್ಟ ಸಮಯದ ಚೌಕಟ್ಟು ಹಾಕುವುದು ಅಸಾಧ್ಯ ಎಂದು ಅವರು ಹೇಳಿದರು. ಉಕ್ರೇನ್ ಕುರಿತು ಮಾತುಕತೆಗಳನ್ನು ಮುಂದುವರಿಸಲು ರಷ್ಯಾ ಸಿದ್ಧವಾಗಿದೆ. ಮತ್ತು ಅವುಗಳನ್ನು ಎಂದಿಗೂ ತಿರಸ್ಕರಿಸಿಲ್ಲ ಎಂದು ಪುಟಿನ್ ತಿಳಿಸಿದರು.

ಏತನ್ಮಧ್ಯೆ, ಉಕ್ರೇನ್ ಸಂಘರ್ಷವನ್ನು ಪರಿಹರಿಸುವ ಕುರಿತು ಲಂಡನ್‌ನಲ್ಲಿ ಐರೋಪ್ಯ ರಾಷ್ಟ್ರಗಳ ಪ್ರತಿನಿಧಿಗಳು ಇಂದು ಅನೌಪಚಾರಿಕ ಮಾತುಕತೆಗಳನ್ನು ನಡೆಸಲಿದ್ದಾರೆ ಎಂದು ಸುದ್ದಿ ಸಂಸ್ಥೆ ವರದಿ ಮಾಡಿದೆ.

*********

ದೇಶದಲ್ಲಿ ಬಿತ್ತನೆ ಬೀಜ ಲಭ್ಯತೆ ಖಾತರಿಪಡಿಸಲು ೧ ಲಕ್ಷದ ೭೪ ಸಾವಿರ ಕ್ವಿಂಟಲ್ ಬಿತ್ತನೆ ಬೀಜ ದಾಸ್ತಾನು ಇದೆ ಎಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ. ನವದೆಹಲಿಯಲ್ಲಿ ಮುಂಗಾರು ಹಂಗಾಮಿನ ರಾಷ್ಟ್ರೀಯ ಸಮಾವೇಶದ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶದ ೯ ಲಕ್ಷದ ೭೬ ಸಾವಿರ ರೈತರ ಗುರುತಿನ ಚೀಟಿಗಳನ್ನು ರಚಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ದೇಶದಲ್ಲಿ ಆಹಾರ ಧಾನ್ಯ ಉತ್ಪಾದನೆ ಇದುವರೆಗಿನ ಅತ್ಯಂತ ಗರಿಷ್ಠ ೩೭೬ ಮಿಲಿಯನ್ ಟನ್‌ಗಳಷ್ಟಾಗುವ ನಿರೀಕ್ಷೆಯಿದೆ ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ.

*********

ದೇಶದ ಎಲ್ಲಾ ತೈಲ ಶುದ್ಧೀಕರಣ ಘಟಕಗಳು ಗರಿಷ್ಠ ಮಟ್ಟದಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ಪೆಟ್ರೋಲ್ ಡೀಸೆಲ್ ಮತ್ತು ದ್ರವೀಕೃತ ಪೆಟ್ರೋಲಿಯಂ ಅನಿಲ ದಾಸ್ತಾನು ಸಾಕಷ್ಟು ಇದೆ ಎಂದು ಸರ್ಕಾರ ತಿಳಿಸಿದೆ. ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಜಂಟಿ ಕಾರ್ಯದರ್ಶಿ ಸುಜಾತಾ ಶರ್ಮಾ ನವದೆಹಲಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಪ್ರತಿದಿನ ೯೨ ಸಾವಿರ ಮೆಟ್ರಿಕ್ ಟನ್‌ಗಳಷ್ಟು ಎಲ್‌ಪಿಜಿ ಉತ್ಪಾದಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ. ಬಂದರು, ಹಡಗು ಮತ್ತು ಜಲಮಾರ್ಗ ಸಚಿವಾಲಯದ ನಿರ್ದೇಶಕ ಓಪೇಶ್‌ಕುಮಾರ್ ಮಾತನಾಡಿ, ೨ ಲಕ್ಷ ೭೦ ಸಾವಿರ ಮೆಟ್ರಿಕ್ ಟನ್ ಕಚ್ಚಾ ತೈಲ ಹೊತ್ತು ತರುತ್ತಿರುವ ನಿಸೋಸ್ ಕೆರೊಸ್ ಎನ್ನುವ ವ್ಯಾಪಾರಿ ಹಡಗು ಹಾರ್ಮುಜ್ ಜಲಸಂಧಿಯನ್ನು ದಾಟಿದ್ದು, ಜೂನ್ ೩ ರಂದು ವಿಶಾಖಪಟ್ಟಣಂಗೆ ಆಗಮಿಸುವ ನಿರೀಕ್ಷೆಯಿದೆ ಎಂದು ಹೇಳಿದ್ದಾರೆ.

*********

ಚಂಡೀಗಢದ ಮಹಾರಾಜ ಯದುವೇಂದ್ರ ಸಿಂಗ್ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್‌ನ ಎರಡನೇ ಅರ್ಹತಾ ಪಂದ್ಯದಲ್ಲಿ ರಾಜಸ್ತಾನ್ ರಾಯಲ್ಸ್ ವಿರುದ್ಧ ಗುಜರಾತ್ ಟೈಟನ್ಸ್ ಏಳು ವಿಕೆಟ್‌ಗಳಿಂದ ಭರ್ಜರಿ ಜಯ ಸಾಧಿಸಿದೆ. ಈ ಮೂಲಕ ನಾಳೆ ನಡೆಯಲಿರುವ ಫೈನಲ್ ಪಂದ್ಯದಲ್ಲಿ ಆರ್‌ಸಿಬಿ ವಿರುದ್ಧ ಗುಜರಾತ್ ಟೈಟನ್ಸ್ ಸೆಣಸಲಿದೆ. ಮೊದಲು ಬ್ಯಾಟಿಂಗ್ ಮಾಡಿದ ರಾಜಸ್ತಾನ್ ರಾಯಲ್ಸ್, ನಿಗದಿತ ೨೦ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೨೧೪ ರನ್ ಗಳಿಸಿತು. ರಾಜಸ್ತಾನ್ ರಾಯಲ್ಸ್ ಪರ ವೈಭವ್ ಸೂರ್ಯವಂಶಿ ೯೬ ಸಿಡಿಸಿದರೆ, ರವೀಂದ್ರ ಜಡೇಜಾ ೪೫ ರನ್ ಗಳಿಸಿದರು. ಗೆಲುವಿನ ಗುರಿ ಬೆನ್ನತ್ತಿದ  ಗುಜರಾತ್ ಟೈಟನ್ಸ್ ೧೮.೪ ಓವರ್‌ಗಳಲ್ಲಿ ೩ ವಿಕೆಟ್ ನಷ್ಟಕ್ಕೆ ೨೧೯ ರನ್ ಗಳಿಸುವ ಮೂಲಕ ಗೆಲುವಿನ ನಗೆ ಬೀರಿತು.

ಗುಜರಾತ್ ಟೈಟನ್ಸ್ ಪರ ಶುಭ್‌ಮನ್ ಗಿಲ್ ೫೩ ಎಸೆತಗಳಲ್ಲಿ ೧೦೪ ಬಾರಿಸಿದರು. ಸಾಯಿ ಸುದರ್ಶನ್ ೩೯ ಎಸೆತಗಳಲ್ಲಿ ೫೮ ರನ್ ಗಳಿಸಿದರು.

*********

ಹಾಂಕಾಂಗ್‌ನಲ್ಲಿ ನಡೆಯುತ್ತಿರುವ ಏಷ್ಯನ್ ೨೦ ವರ್ಷದೊಳಗಿನ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ನಲ್ಲಿ ಭಾರತ ತನ್ನ ಅದ್ಭುತ ಪ್ರದರ್ಶನವನ್ನು ಮುಂದುವರಿಸಿದೆ. ನಾಲ್ಕು ಚಿನ್ನ, ಎರಡು ಬೆಳ್ಳಿ ಮತ್ತು ಎರಡು ಕಂಚು ಸೇರಿದಂತೆ ಪದಕಗಳ ಸಂಖ್ಯೆ ಎಂಟಕ್ಕೆ ಏರಿಕೆಯಾಗಿದೆ. ಈ ಮೂಲಕ ಪಟ್ಟಿಯಲ್ಲಿ ಭಾರತ ಎರಡನೇ ಸ್ಥಾನದಲ್ಲಿದೆ. ಚೀನಾ ಮೊದಲ ಸ್ಥಾನದಲ್ಲಿದೆ. ಸ್ಪರ್ಧೆಯ ಎರಡನೇ ದಿನವಾದ ನಿನ್ನೆ, ಭಾರತೀಯ ಕ್ರೀಡಾಪಟುಗಳು ನಾಲ್ಕು ಚಿನ್ನ ಸೇರಿದಂತೆ ಏಳು ಪದಕಗಳನ್ನು ಗೆದ್ದರು. ೧೯ ವರ್ಷದ ಪೂಜಾ ಸಿಂಗ್ ಅವರು ಮಹಿಳೆಯರ ಹೈಜಂಪ್‌ನಲ್ಲಿ ೧.೯೩ ಮೀಟರ್ ಜಿಗಿತದೊಂದಿಗೆ ಚಿನ್ನ ಗೆದ್ದರು. ಈ ಮೂಲಕ ಅವರು ೨೦೧೨ ರಲ್ಲಿ ಸಹನಾ ಕುಮಾರಿ ಸ್ಥಾಪಿಸಿದ್ದ ಹಿಂದಿನ ರಾಷ್ಟ್ರೀಯ ದಾಖಲೆಯನ್ನು ಮುರಿದರು. ನಿತಿನ್ ಗುಪ್ತಾ ಅವರು ಪುರುಷರ ಐದು ಸಾವಿರ ಮೀಟರ್ ರೇಸ್ ವಾಕ್ ಅನ್ನು ಗೆದ್ದರು, ಅಮನಾತ್ ಕಾಂಬೋಜ್ ಮಹಿಳೆಯರ ಡಿಸ್ಕಸ್ ಥ್ರೋನಲ್ಲಿ ಅಗ್ರಸ್ಥಾನ ಪಡೆದರು ಮತ್ತು ರಾಹುಲ್ ಜಖರ್, ಪುರುಷರ ಡೆಕಾಥ್ಲಾನ್‌ನಲ್ಲಿ ಚಿನ್ನದ ಪದಕ ವಿಜೇತರಾದರು. ಸಾಧನಾ ದೇವಿ, ಮಹಿಳೆಯರ ಟ್ರಿಪಲ್ ಜಂಪ್‌ನಲ್ಲಿ ಬೆಳ್ಳಿ ಗೆದ್ದರೆ, ಉಪಕರ್, ಪುರುಷರ ಡೆಕಾಥ್ಲಾನ್‌ನಲ್ಲಿ ಬೆಳ್ಳಿ ಪದಕ ವಿಜೇತರಾದರು. ಮಹಿಳೆಯರ ೪೦೦ ಮೀಟರ್ ಓಟದಲ್ಲಿ ನೀರು ಪಾಠಕ್, ಕಂಚಿನ ಪದಕ ಗೆದ್ದರು.

*****END****